## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿ, ಬೆಂಗಳೂರು – ಪ್ಯಾರಾ ಮೆಡಿಕಲ್ ಡಯಾಲಿಸಿಸ್ ಕೋರ್ಸ್‌ನ ಮಂಜೂರಾತಿ ಬಗ್ಗೆ.

ಓದಲಾಗಿದೆ: ಪತ್ರ ಸಂಖ್ಯೆ: ಪಿಎಂಬಿ/05/08–09 ದಿನಾಂಕ 25.06.2008.

ಪ್ರಸ್ತಾವನೆ:

ಕರ್ನಾಟಕ ಪ್ಯಾರಾ ಮೆಡಿಕಲ್ ಬೋರ್ಡ್‌ನ ಸದಸ್ಯ ಕಾರ್ಯದರ್ಶಿಯವರು ಮೇಲೆ ಓದಲಾದ ತಮ್ಮ ಪತ್ರದಲ್ಲಿ ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿ, ಬೆಂಗಳೂರು ಇವರಿಗೆ ಡಿಪ್ಲೊಮ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸ್‌ನ ಮಂಜೂರಾತಿಗಾಗಿ ಅರ್ಜಿಯನ್ನು ಪ್ಯಾರಾ ಮೆಡಿಕಲ್ ಮಂಡಳಿಗೆ ಸಲ್ಲಿಸಿದ್ದಾರೆಂದು, ಮಂಡಳಿಯು ವಿಷಯ ತಜ್ಞರ ತಂಡವನ್ನು ರಚಿಸಿ ಕೋರ್ಸುಗಳನ್ನು ಸಂಸ್ಥೆಯು ನಡೆಸಲು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರಿವೀಕ್ಷಿಸಿ ಅದರ ವರದಿಯನ್ನು ಸಲ್ಲಿಸಲು ಸೂಚಿಸಿತ್ತೆಂದು, ತಜ್ಞರ ತಂಡವು ಸಂಸ್ಥೆಗೆ ದಿನಾಂಕ 02.06.2008 ರಂದು ಭೇಟಿ ನೀಡಿ ಪರಿವೀಕ್ಷಿಸಿ, ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಸಲ್ಲಿಸಿತ್ತೆಂದು, ತಜ್ಞರ ತಂಡದ ಪರಿವೀಕ್ಷಣಾ ವರದಿಯನ್ನು ದಿನಾಂಕ 13.06.2008 ರಂದು ನಡೆದ ಮಂಡಳಿಯ ಸಭೆಯಲ್ಲಿ ವಿಶ್ಲೇಷಿಸಿ ಕೋರ್ಸ್‌ನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿದೆಯೆಂದು ವರದಿ ಮಾಡುತ್ತಾ ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಇನ್ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿ ಬೆಂಗಳೂರು ಈ ಸಂಸ್ಥೆಗೆ ಡಿಪ್ಲೊಮ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸ್‌ನ್ನು ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಆಕುಕ 61 ಎಂಎಂಇ 2008, ಬೆಂಗಳೂರು, ದಿನಾಂಕ 27-11-2008

ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿ ಸಂಸ್ಥೆ, ಬೆಂಗಳೂರು ಇವರಿಗೆ 20 (ಇಪ್ಪತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಡಿಪ್ಲೊಮ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸ್‌ನ್ನು ಪ್ರಾರಂಭಿಸಲು 2008–09ನೇ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಮಂಜೂರಾತಿ ನೀಡಿದೆ.

ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/– (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/– (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(2) ಸಂಸ್ಥೆಯವರು ಕೋರ್ಸನ್ನು ಪ್ರಾರಂಭಿಸುವ ಮೊದಲು ಬೋರ್ಡ್ ನಿಗದಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನೆಫ್ರೋ–ಯುರಾಲಜಿ ಸಂಸ್ಥೆ, ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು ಈ ಸಂಸ್ಥೆಯಲ್ಲಿ ಪ್ಯಾರಾ ಮೆಡಿಕಲ್ ಕೋರ್ಸನ್ನು ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

******

ಓದಲಾಗಿದೆ:

ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ ಪತ್ರ ಸಂಖ್ಯೆಪಿಎಂಬಿ/240/2015–16, ದಿನಾಂಕ 26.07.2017.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ, ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರು ನೆಫ್ರೋ–ಯುರಾಲಜಿ ಸಂಸ್ಥೆ, ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು ಈ ಸಂಸ್ಥೆಯು 2017–18 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಎಕ್ಸ್–ರೇ ಟೆಕ್ನಾಲಜಿ ಕೋರ್ಸನ್ನು 20 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅರ್ಜಿಯನ್ನು ಸಲ್ಲಿಸಿದ್ದು, ಪ್ಯಾರಾ ಮೆಡಿಕಲ್ ಬೋರ್ಡ್ ಈ ಸಂಸ್ಥೆಯನ್ನು ಸದರಿ ಕೋರ್ಸುಗಳೊಂದಿಗೆ ಹೊಸದಾಗಿ ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಸ್ಥಳ ತಪಾಸಣೆ ನಡೆಸಿ, ತಪಾಸಣಾ ತಂಡದ ಶಿಫಾರಸಿನನ್ವಯ ಈ ಸಂಸ್ಥೆಗೆ 2017–18 ನೇ ಸಾಲಿನಿಂದ ಸದರಿ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರುತ್ತಾ, ತಪಾಸಣಾ ತಂಡವು ಸಲ್ಲಿಸಿರುವ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ನೆಫ್ರೋ–ಯುರಾಲಜಿ ಸಂಸ್ಥೆ, ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು ಈ ಸಂಸ್ಥೆಗೆ 2017–18 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಎಕ್ಸ್–ರೇ ಟೆಕ್ನಾಲಜಿ ಕೋರ್ಸನ್ನು 20 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 288 ಎಂಎಂಸಿ 2017, ಬೆಂಗಳೂರು, ದಿನಾಂಕ 18–08–2017**

ನೆಫ್ರೋ–ಯುರಾಲಜಿ ಸಂಸ್ಥೆ, ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು ಈ ಸಂಸ್ಥೆಗೆ 2017–18 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಎಕ್ಸ್–ರೇ ಟೆಕ್ನಾಲಜಿ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/– (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಗಳು ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/– (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸುವ ದರಗಳಂತೆ ಶುಲ್ಕವನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಈ ಸಂಸ್ಥೆಯವರು ಸದರಿ ಕೋರ್ಸುಗಳನ್ನು ಪ್ರಾರಂಭಿಸುವ ಮೊದಲು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ನವೆಂಬರ್ ತಿಂಗಳೊಳಗಾಗಿ ನೀಡಿ, ಜನವರಿ ಅಥವಾ ಫೆಬ್ರವರಿ ತಿಂಗಳ ಮಧ್ಯಂತರದೊಳಗೆ ಪ್ರವೇಶಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು, ಮೂಲ ಅಂಕಪಟ್ಟಿಗಳನ್ನು ಮತ್ತು ದೃಢೀಕರಣಗಳನ್ನು ಈ ಸಂಸ್ಥೆಯವರು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(1)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ-ಯುರಾಲಜಿ, ವಿಕ್ಟೋರಿಯಾ ಆಸ್ಪತ್ರೆ ಕ್ಯಾಂಪಸ್, ಬೆಂಗಳೂರು ಈ ಸಂಸ್ಥೆಗೆ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

******

Institute of Nephro-Urology
Victoria Hospital Campus, Bangalore
Registration No. 4197 Dt. 28/9
Off. Supdt. R.O. Director

ಓದಲಾಗಿದೆ:

ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ [illegible] 53/2015-16, ದಿನಾಂಕ 23.07.2015 ಮತ್ತು 31.07.2015.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರು ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ-ಯುರಾಲಜಿ, ವಿಕ್ಟೋರಿಯಾ ಆಸ್ಪತ್ರೆ ಕ್ಯಾಂಪಸ್, ಬೆಂಗಳೂರು ಈ ಸಂಸ್ಥೆಯು ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸನ್ನು 10 (ಹತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹಾಗೂ ಡಿಪ್ಲೊಮಾ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅರ್ಜಿಯನ್ನು ಸಲ್ಲಿಸಿದ್ದು, ಪ್ಯಾರಾ ಮೆಡಿಕಲ್ ಬೋರ್ಡ್ ಈ ಸಂಸ್ಥೆಯಲ್ಲಿ ಸದರಿ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಸ್ಥಳ ತಪಾಸಣೆ ನಡೆಸಿ, ವರದಿ ಸಲ್ಲಿಸಲು ತಪಾಸಣಾ ತಂಡವನ್ನು ರಚಿಸಲಾಗಿತ್ತೆಂದು, ಅದರಂತೆ, ತಪಾಸಣಾ ತಂಡವು ಸಂಸ್ಥೆಗೆ ಭೇಟಿ ನೀಡಿ, ಸ್ಥಳ ತಪಾಸಣೆ ನಡೆಸಿ, ಈ ಸಂಸ್ಥೆಯಲ್ಲಿ ಸದರಿ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಶಿಫಾರಸ್ಸು ಮಾಡಿರುತ್ತದೆಂದು ತಿಳಿಸುತ್ತಾ, ಸದರಿ ಸಂಸ್ಥೆಗೆ 2015-16 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸನ್ನು 10 (ಹತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹಾಗೂ ಡಿಪ್ಲೊಮಾ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರುತ್ತಾ, ಸ್ಥಳೀಯ ತಪಾಸಣಾ ತಂಡದ ವರದಿ ಹಾಗೂ ಈ ಬಗ್ಗೆ ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ಜರುಗಿದ ಸಭೆಯ ನಡವಳಿಯ ಪ್ರತಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ-ಯುರಾಲಜಿ, ವಿಕ್ಟೋರಿಯಾ ಆಸ್ಪತ್ರೆ ಕ್ಯಾಂಪಸ್, ಬೆಂಗಳೂರು ಈ ಸಂಸ್ಥೆಗೆ 2015-16 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸನ್ನು 10 (ಹತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹಾಗೂ ಡಿಪ್ಲೊಮಾ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 275 ಎಂಎಸ್‌ಎಫ್ 2015, ಬೆಂಗಳೂರು, ದಿನಾಂಕ 21-09-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ-ಯುರಾಲಜಿ, ವಿಕ್ಟೋರಿಯಾ ಆಸ್ಪತ್ರೆ ಕ್ಯಾಂಪಸ್, ಬೆಂಗಳೂರು ಈ ಸಂಸ್ಥೆಗೆ 2015-16 ನೇ ಸಾಲಿನಿಂದ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸನ್ನು 10 (ಹತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹಾಗೂ ಡಿಪ್ಲೊಮಾ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

### ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಗಳು ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ